# ಪ್ರವಾದಿ ಹಗ್ಗಾಯನ ಗ್ರಂಥ

## ಮುನ್ನುಡಿ

ಪ್ರವಾದಿ ಹಗ್ಗಾಯನ ಕಾಲ ಕ್ರಿ.ಪೂ. 520. ಬಾಬಿಲೋನಿಗೆ ಸೆರೆಹೋಗಿದ್ದ ಯೆಹೂದ್ಯರು ಜೆರುಸಲೇಮಿಗೆ ಹಿಂತಿರುಗಿ ಕೆಲವೇ ವರ್ಷಗಳಾಗಿದ್ದವು. ಜೆರುಸಲೇಮ್ ನಗರ ನಾಶವಾಗಿತ್ತು. ಮಹಾದೇವಾಲಯವೂ ನೆಲಸಮವಾಗಿತ್ತು. ಅದನ್ನು ಪುನಃ ಕಟ್ಟಲು ಹಗ್ಗಾಯನ ಮುಖಾಂತರ ದೇವರು ಜನರನ್ನು ಪ್ರೋತ್ಸಾಹಿಸುತ್ತಾರೆ. ಜನರು ತಮ್ಮ ಜೀವನವನ್ನು ಸುಧಾರಿಸಿ ಹೊಸಬರಾಗಬೇಕು, ಪರಿಶುದ್ಧರಾಗಬೇಕು. ಹಾಗೆ ಮಾಡಿದ್ದಲ್ಲಿ ದೇವರು ವಾಗ್ದಾನ ಮಾಡಿರುವ ಶಾಂತಿ ಸೌಭಾಗ್ಯ ಲಭ್ಯವಾಗುತ್ತದೆ. ಈ ವಿಷಯಗಳನ್ನು ಕುರಿತ ದೈವೋಕ್ತಿಗಳ ಸಂಕಲನವೇ ಈ ಗ್ರಂಥ.

## ಪರಿವಿಡಿ


| | | | | |
|---|---|---|---|---|
| ಮಹಾದೇವಾಲಯವನ್ನು ಪುನಃ ಕಟ್ಟಲು ಆಜ್ಞೆ | – | 1.1 | – | 1.15 |
| ಉಪಶಮನ ಹಾಗೂ ಭರವಸೆಯ ಸಂದೇಶ | – | 2.1 | – | 2.23 |


### ಮಹಾದೇವಾಲಯವನ್ನು ಪುನಃ ಕಟ್ಟಲು ಆಜ್ಞೆ

**1** ಪರ್ಷಿಯಾದ ಚಕ್ರವರ್ತಿಯಾದ ಡೇರಿಯಸ್ ಅವನ ಆಳ್ವಿಕೆಯ ಎರಡನೇ ವರ್ಷದ ಆರನೇ ತಿಂಗಳ ಮೊದಲನೆಯ ದಿನದಂದು ಪ್ರವಾದಿ ಹಗ್ಗಾಯನ ಮುಖಾಂತರ ಸರ್ವೇಶ್ವರಸ್ವಾಮಿ ನೀಡಿದ ದೈವೋಕ್ತಿ: ಅದು ಶೆಯಲ್ತಿಯೇಲನ ಮಗನೂ ಜುದೇಯ ನಾಡಿನ ದೇಶಾಧಿಪತಿಯೂ ಆದ ಜೆರುಬ್ಬಾಬೆಲನನ್ನು ಮತ್ತು ಯೆಹೋಚಾದಾಕನ ಮಗನೂ ಮಹಾಯಾಜಕನೂ ಆದ ಯೆಹೋಶುವನನ್ನು ಉದ್ದೇಶಿಸಿ ಕೊಡಲಾದ ಸಂದೇಶವಾಗಿತ್ತು.

2 ಸೇನಾಧೀಶ್ವರರಾದ ಸರ್ವೇಶ್ವರ ಇಂತೆನ್ನುತ್ತಾರೆ: "ಮಹಾದೇವಾಲಯವನ್ನು ಪುನಃ ಕಟ್ಟುವುದಕ್ಕೆ
ಸಮಯ ಇನ್ನೂ ಬಂದಿಲ್ಲ ಎಂದುಕೊಳ್ಳುತ್ತಾರೆ ಈ ಜನರು." 3ಆಗ ಪ್ರವಾದಿ ಹಗ್ಗಾಯನ ಮುಖಾಂತರ
ಸರ್ವೇಶ್ವರ ಕೊಟ್ಟ ಸಂದೇಶವೇನೆಂದರೆ: 4"ನನ್ನ ಆಲಯ ಹಾಳುಬಿದ್ದಿರುವಾಗ ನೀವು ಸೊಗಸಾದ ಹಲಗೆ
ಹೊದಿಸಿದ ಮನೆಗಳಲ್ಲಿ ವಾಸಿಸುವುದು ಸರಿಯೋ? 5ನಮಗೆ ಒದಗಿರುವ ಪರಿಸ್ಥಿತಿಯನ್ನು ಆಲೋಚಿಸಿ
ನೋಡಿ. 6ನೀವು ಬಿತ್ತಿದ ಬೀಜ ಬಹಳ, ಪಡೆದ ಫಲ ವಿರಳ; ತಿನ್ನುತ್ತೀರಿ, ಆದರೆ ತೃಪ್ತಿಯಿಲ್ಲ; ಕುಡಿಯುತ್ತೀರಿ, ಆದರೆ ದಾಹ ನೀಗುವುದಿಲ್ಲ. ಹೊದೆಯುತ್ತೀರಿ, ಆದರೆ ಚಳಿ ಹೋಗುವುದಿಲ್ಲ. ದುಡಿಮೆಗಾರನ ದುಡ್ಡಿನ ಚೀಲ ತೂತಿನ ಚೀಲ."

7 ಸೇನಾಧೀಶ್ವರ ಸರ್ವೇಶ್ವರ ಹೇಳುವುದನ್ನು ಕೇಳಿ: "ನಿಮಗೆ ಒದಗಿರುವ ಪರಿಸ್ಥಿತಿಯನ್ನು ಕುರಿತು
ಆಲೋಚಿಸಿ ನೋಡಿ. 8ಮಲೆನಾಡಿಗೆ ಹೋಗಿ ಮರವನ್ನು ತಂದು ನನ್ನ ಆಲಯವನ್ನು ಕಟ್ಟಿರಿ. ಆಗ ನಾನು
ಪ್ರಸನ್ನನಾಗುವೆನು. ನನ್ನ ಮಹಿಮೆಯನ್ನು ಪ್ರಕಟಿಸುವೆನು," ಎಂದು ನುಡಿಯುತ್ತಾರೆ ಸ್ವಾಮಿ. 9ನೀವು
ನಿರೀಕ್ಷಿಸಿದ್ದು ಸಮೃದ್ಧಿ ಸುಗ್ಗಿ, ಆದರೆ ಸಿಕ್ಕಿದ್ದು ಕಿಂಚಿತ್ತು ಮಾತ್ರ; ಅದನ್ನು ಮನೆಗೆ ತಂದಾಗ ನಾನದನ್ನು ಗಾಳಿಗೆ ತೂರಿಬಿಟ್ಟೆ. ಇದಕ್ಕೆ ಕಾರಣವೇನು?" ಎನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ. "ಕಾರಣವೇನೆಂದರೆ, ನನ್ನ ಆಲಯ ಹಾಳುಬಿದ್ದಿರುವಾಗ ನಿಮ್ಮಲ್ಲಿ ಪ್ರತಿ ಒಬ್ಬನೂ ತನ್ನ ಸ್ವಂತ ಮನೆಯ ಕೆಲಸದಲ್ಲಿ
ಮಗ್ನನಾಗಿದ್ದಾನೆ. 10ಈ ಪರಿಣಾಮವಾಗಿ ಆಕಾಶ ಮಳೆಯನ್ನು ಸುರಿಸಿಲ್ಲ. ಭೂಮಿ ಬೆಳೆಯನ್ನು ಫಲಿಸಿಲ್ಲ.

11ಭೂಮಿ, ಬೆಟ್ಟ, ಧಾನ್ಯ, ದ್ರಾಕ್ಷಾರಸ, ತೈಲಗಿಡಗಳತೋಟ, ಹೊಲಗದ್ದೆಗಳ ಉತ್ಪನ್ನ ಇವುಗಳ ಮೇಲೂ ಹಾಗೂ ಜನ, ದನಕರುಗಳು ಮತ್ತು ನಿಮ್ಮ ಕೈಕಸುಬುಗಳ ಮೇಲೂ ಅನಾವೃಷ್ಟಿಯನ್ನು ತಂದಿದ್ದೇನೆ."

**ದೈವಾಜ್ಞೆಯ ಪಾಲನೆ**

12 ಆಗ ಶೆಯಲ್ತೀಯೇಲನ ಮಗ ಜೆರುಬ್ಬಾಬೆಲ್, ಯೆಹೋಚಾದಕನ ಮಗನೂ ಮಹಾಯಾಜಕನೂ ಆದ ಯೆಹೋಶುವ ಮತತು ಅಳಿದುಳಿದ ಜನರೆಲ್ಲರು ದೇವರಾದ ಸರ್ವೇಶ್ವರಸ್ವಾಮಿಯ ನುಡಿಗೆ ಕಿವಿಗೊಟ್ಟರು. ಆ ಸ್ವಾಮಿಯ ಅಪ್ಪಣೆಯ ಪ್ರಕಾರ ಪ್ರವಾದಿ ಹಗ್ಗಾಯನು ಹೇಳಿದ ಮಾತನ್ನು ಕೇಳಿದರು. ಆ ಸ್ವಾಮಿಯಲ್ಲಿ ಭಯಭಕ್ತಿಯುಳ್ಳವರಾದರು. 13ಇದನ್ನು ನೋಡಿ ಸ್ವಾಮಿಯ ದೂತನಾದ ಹಗ್ಗಾಯನು ಜನರಿಗೆ, "ನಾನು ನಿಮ್ಮೊಡನೆ ಇದ್ದೇನೆ ಎಂದು ಸರ್ವೇಶ್ವರ ನುಡಿದಿದ್ದಾರೆ. ಇದು ಸರ್ವೇಶ್ವರಸ್ವಾಮಿಯ ಸಂದೇಶ," ಎಂದನು. 14ಕೂಡಲೆ ಶೆಯಲ್ತೀಯೇಲನ ಮಗನೂ ಜುದೇಯ ನಾಡಿನ ದೇಶಾಧಿಪತಿಯೂ ಆದ ಜೆರುಬ್ಬಾಬೆಲ್, ಯೆಹೋಚಾದಕನ ಮಗನೂ ಮಹಾಯಾಜಕನೂ ಆದ ಯೆಹೋಶುವ, ಮತ್ತು ಅಳಿದುಳಿದ ಜನರೆಲ್ಲರು ಸ್ವಾಮಿಯ ಪ್ರೇರಣೆಯನ್ನು ಪಡೆದರು. 15ಡೇರಿಯಸ್ ಚಕ್ರವರ್ತಿಯ ಆಳ್ವಿಕೆಯ ಎರಡನೇ ವರ್ಷದ ಆರನೇ ತಿಂಗಳಿನ ಇಪ್ಪತ್ತನಾಲ್ಕನೆಯ ದಿನದಲ್ಲಿ ತಮ್ಮ ದೇವರಾದ ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ ಆಲಯದ ನಿರ್ಮಾಣಕ್ಕೆ ಕೈ ಹಾಕಿದರು.

**ಹೊಸ ದೇವಾಲಯದ ವೈಭವ**

**2** ಅದೇ ವರ್ಷದ ಏಳನೇ ತಿಂಗಳಿನ ಇಪ್ಪತ್ತೊಂದನೆಯ ದಿನದಲ್ಲಿ ಪ್ರವಾದಿ ಹಗ್ಗಾಯನ ಮೂಲಕ ಸರ್ವೇಶ್ವರ ಈ ಸಂದೇಶವನ್ನು ದಯಪಾಲಿಸಿದರು: 2ಶೆಯಲ್ತೀಯೇಲನ ಮಗನೂ ಜುದೇಯ ನಾಡಿನ ಅಧಿಪತಿಯೂ ಆದ ಜೆರುಬ್ಬಾಬೆಲನಿಗೆ ಮತ್ತು ಮಹಾಯಾಜಕ ಯೆಹೋಶುವನಿಗೆ ಮತ್ತು ಅಳಿದುಳಿದ ಜನರೆಲ್ಲರಿಗೆ ಹೀಗೆ ತಿಳಿದು – 3"ಈ ದೇವಾಲಯದ ಪೂರ್ವ ವೈಭವವನ್ನು ನೋಡಿದವರು ನಿಮ್ಮಲ್ಲಿ ಎಷ್ಟು ಮಂದಿ ಉಳಿದಿದ್ದೀರಿ? ಇದರ ಈಗಿನ ಸ್ಥಿತಿ ನಿಮಗೆ ಹೇಗೆ ತೋರುತ್ತದೆ? ನಿಮ್ಮ ದೃಷ್ಟಿಗೆ ಏನೂ ಇಲ್ಲದಂತೆ ಕಾಣಿಸುತ್ತದಲ್ಲವೇ? ಸರ್ವೇಶ್ವರ ಆದ ನಾನು ಹೇಳುವುದನ್ನು ಕೇಳಿ: 4ಜೆರುಬ್ಬಾಬೆಲನೇ, ಈಗ ಧೈರ್ಯದಿಂದಿರು. ಯೆಹೋಚಾದಾಕನ ಮಗನೂ ಮಹಾಯಾಜಕನೂ ಆದ ಯೆಹೋಶುವನೇ, ಎದೆಗುಂದಬೇಡ. ನಾಡಿನ ಜನರೇ, ನೀವೆಲ್ಲರು ಧೈರ್ಯದಿಂದ ಕೆಲಸಮಾಡಿ. ಇದು ಸೇನಾಧೀಶ್ವರ ಸರ್ವೇಶ್ವರ ಆದ ನನ್ನ ನುಡಿ. ನಾನು ನಿಮ್ಮೊಡನೆ ಇದ್ದೇನೆ. 5ನೀವು ಈಜಿಪ್ಟ್ ದೇಶದಿಂದ ಹೊರಟುಬಂದಾಗ ನಾನು ನಿಮಗೆ ಪ್ರಮಾಣವಾಗಿ ಕೊಟ್ಟ ಮಾತನ್ನು ನೆರವೇರಿಸುವೆನು. ನನ್ನ ಆತ್ಮವು ನಿಮ್ಮಲ್ಲಿ ನೆಲೆಗೊಂಡಿದೆ; ಭಯಪಡದಿರಿ.

6 "ಸ್ವಲ್ಪಕಾಲದಲ್ಲೇ ಮತ್ತೊಮ್ಮೆ ಭೂಮ್ಯಾಕಾಶಗಳನ್ನೂ ಸಮುದ್ರವನ್ನೂ ಮರುಭೂಮಿಯನ್ನೂ ಅದರಿಸುವೆನು. 7ಸಕಲ ಜನಾಂಗಗಳನ್ನು ನಡುಗಿಸುವೆನು. ಆಗ ಎಲ್ಲ ರಾಷ್ಟ್ರಗಳ ಸಿರಿಸಂಪತ್ತು ಇಲ್ಲಿಗೆ ಬರುವುದು. ಈ ಆಲಯವನ್ನು ವೈಭವದಿಂದ ತುಂಬಿಸುವೆನು. ಇದು ಸರ್ವಶಕ್ತ ಸರ್ವೇಶ್ವರನ ನುಡಿ. 8ಬೆಳ್ಳಿ ನನ್ನದು, ಬಂಗಾರವೆಲ್ಲ ನನ್ನದು. 9ಈ ಆಲಯದ ಮುಂದಿನ ವೈಭವವು ಹಿಂದಿನ ವೈಭವಕ್ಕಿಂತ ಶ್ರೇಷ್ಠವಾಗಿರುವುದು. ಈ ಸ್ಥಳದಲ್ಲಿ ಶಾಂತಿ ಸಮೃದ್ಧಿಯನ್ನು ಅನುಗ್ರಹಿಸುವೆನು" ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.

**ಯಾಜಕರೊಡನೆ ಸಮಾಲೋಚನೆ**

10 ಡೇರಿಯಸ್ ಚಕ್ರವರ್ತಿಯ ಆಳ್ವಿಕೆಯ ಎರಡನೇ ವರ್ಷದ ಒಂಬತ್ತನೇ ತಿಂಗಳಿನ ಇಪ್ಪತ್ತನಾಲ್ಕನೆಯ ದಿನದಲ್ಲಿ ಪ್ರವಾದಿ ಹಗ್ಗಾಯನ ಮೂಲಕ ಈ ಸಂದೇಶವನ್ನು ಸರ್ವೇಶ್ವರ ದಯಪಾಲಿಸಿದರು. 11ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ – "ನೀನು ಯಾಜಕರ ಬಳಿಗೆ ಹೋಗು. 12ಒಬ್ಬನು ತನ್ನ ಬಟ್ಟೆಯ ಸೆರಗಿನಲ್ಲಿ ಪ್ರತಿಷ್ಠಿತ ಮಾಂಸವನ್ನು ಕಟ್ಟಿಕೊಂಡು ಬರುತ್ತಿರುವಾಗ ಆ ಸೆರಗು

ರೊಟ್ಟಿಯನ್ನಾಗಲಿ, ಅನ್ನವನ್ನಾಗಲಿ, ದ್ರಾಕ್ಷಾರಸವನ್ನಾಗಲೀ, ಎಣ್ಣೆಯನ್ನಾಗಲೀ ಅಥವಾ ಯಾವ ಆಹಾರ ಪದಾರ್ಥವನ್ನೇ ಆಗಲಿ ಸೋಕಿದರೆ ಅದು ಪವಿತ್ರವಾಗುತ್ತದೋ? ಎಂದು ಧರ್ಮವಿಧಿಯನ್ನು ವಿಚಾರಿಸು."

ಪ್ರವಾದಿ ಹಾಗೆ ವಿಚಾರಿಸಲು ಯಾಜಕರು 'ಇಲ್ಲ' ಎಂದು ಉತ್ತರಕೊಟ್ಟರು.

13 ಆಗ ಹಗ್ಗಾಯನು, "ಹೆಣವನ್ನು ಮುಟ್ಟಿ ಅಶುದ್ಧನಾದವನು ಇವುಗಳಲ್ಲಿ ಯಾವುದನ್ನಾದರೂ ಸೋಕಿದರೆ ಅದು ಅಶುದ್ಧವಾಗುತ್ತದೋ" ಎಂದು ಕೇಳಿದನು. ಅದಕ್ಕೆ ಯಾಜಕರು: "ಖಂಡಿತವಾಗಿ ಅಶುದ್ಧವಾಗುತ್ತದೆ" ಎಂದು ಉತ್ತರಕೊಟ್ಟರು.

14 ಆಗ ಹಗ್ಗಾಯನು ಮುಂದುವರಿಸುತ್ತಾ, "ಸರ್ವೇಶ್ವರ ಇಂತೆನ್ನುತ್ತಾರೆ: ಇದರಂತೆಯೇ ಈ ಪ್ರಜೆ,ಈ ಜನಾಂಗ ಕೈಹಾಕುವ ಪ್ರತಿಯೊಂದು ಕೆಲಸ, ಇಲ್ಲಿಗೆ ತರುವ ಕಾಣಿಕೆ, ನೈವೇದ್ಯ, ಎಲ್ಲವೂ ನನಗೆ ಹೊಲೆಯಾಗಿಯೇ ಇದೆ," ಎಂದನು.

## ಸಮೃದ್ಧಿಯ ದಿನಗಳು ಬರಲಿವೆ

15 ಸರ್ವೇಶ್ವರ ಇಂತೆನ್ನುತ್ತಾರೆ: "ಸರ್ವೇಶ್ವರನ ಆಲಯನಿವೇಶನದಲ್ಲಿ ಕಲ್ಲಿನ ಮೇಲೆ ಕಲ್ಲಿಡುವ ಈ ಮೊದಲ ದಿನದ ಹಿಂದಿನ ಕಾಲವನ್ನು ನೆನಪಿಗೆ ತಂದುಕೊಳ್ಳಿ; 16ಆ ಕಾಲದಲ್ಲಿ ಒಬ್ಬನು ಇಪ್ಪತ್ತು ಸೇರಿನ ಮೆದೆಗೆ ಬಂದಾಗ ಹತ್ತು ಸೇರು ಧಾನ್ಯ ಮಾತ್ರ ಸಿಕ್ಕುತ್ತಿತ್ತಲ್ಲವೆ? ಐವತ್ತು ಸೇರು ದ್ರಾಕ್ಷಾರಸವನ್ನು ಮೊಗೆಯ ಬೇಕೆಂದು ತೊಟ್ಟಿಗೆ ಬಂದಾಗ ಇಪ್ಪತ್ತು ಸೇರು ಮಾತ್ರ ದೊರೆಯುತ್ತಿತ್ತಷ್ಟೆ. 17ನಾನು ನಿಮ್ಮ ದುಡಿಮೆಯ ಫಲವನ್ನು ಆನೆಕಲ್ಲು, ಬೂಷ್ಟು, ಬಿಸಿಗಾಳಿ – ಇವುಗಳಿಂದ ಹಾಳುಮಾಡಿ ನಿಮ್ಮನ್ನು ಬಾಧಿಸಿದೆನು. ಆದರೂ ನೀವು ನನ್ನ ಕಡೆಗೆ ತಿರುಗಿಕೊಳ್ಳಲಿಲ್ಲ. ಇದನ್ನು ನೆನಪಿನಲ್ಲಿಡಿ. ಇದು ಸರ್ವೇಶ್ವರನ ನುಡಿ. 18ಮಹಾದೇವಾಲಯಕ್ಕೆ ಅಸ್ತಿಭಾರಹಾಕಿದ ಅಂದರೆ, ಒಂಬತ್ತನೇ ತಿಂಗಳಿನ ಇಪ್ಪತ್ತನಾಲ್ಕನೇ ಈ ದಿನದ ಹಿಂದಿನ ಕಾಲವನ್ನು ನೆನಪಿಗೆ ತಂದುಕೊಳ್ಳಿ. 19ಇನ್ನು ಮುಂದಕ್ಕೂ ಕಣಜದಲ್ಲಿ ಕಾಳಿಲ್ಲದೆ ಇರುವುದೋ? ದ್ರಾಕ್ಷೆ, ಅಂಜೂರ, ದಾಳಿಂಬೆ, ಓಲಿವ್ ಗಿಡಗಳು ಫಲಿಸದೆ ಹೋಗುವವೋ? ಇಲ್ಲ. ಈ ದಿನ ಮೊದಲ್ಗೊಂಡು ನಾನು ನಿಮ್ಮನ್ನು ಆಶೀರ್ವದಿಸುವೆನು."

## ಜೆರುಬ್ಬಾಬೆಲನಿಗಿತ್ತ ವಾಗ್ದಾನ

20 ಅದೇ ಒಂಬತ್ತನೆಯ ತಿಂಗಳಿನ ಇಪ್ಪತ್ತನಾಲ್ಕನೇ ದಿನದಲ್ಲಿ ಸರ್ವೇಶ್ವರ ಹಗ್ಗಾಯನಿಗೆ ಈ ಎರಡನೆಯ ಸಂದೇಶವನ್ನು ದಯಪಾಲಿಸಿದರು: 21"ಜುದೇಯ ನಾಡಿನ ಅಧಿಪತಿಯಾದ ಜೆರುಬ್ಬಾಬೆಲನಿಗೆ ಹೀಗೆಂದು ನುಡಿ: ನಾನು ಭೂಮ್ಯಾಕಾಶಗಳನ್ನು ಅದರಿಸುವೆನು. 22ರಾಜ್ಯಗಳ ಸಿಂಹಾಸನವನ್ನು ಕೆಡವಿಬಿಡುವೆನು. ರಾಷ್ಟ್ರಗಳ ಸಂಸ್ಥಾನಬಲವನ್ನು ಧ್ವಂಸಮಾಡುವೆನು. ರಥಗಳನ್ನೂ ರಥಾರೂಢರನ್ನೂ ದಬ್ಬಿಬಿಡುವೆನು. ಕುದುರೆಗಳೂ ರಾಹುತರೂ ಬಿದ್ದುಹೋಗುವರು; ಒಬ್ಬನು ಮತ್ತೊಬ್ಬನ ಕತ್ತಿಗೆ ತುತ್ತಾಗುವನು." 23ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: "ಶೆಯಲ್ತೀಯೇಲನ ಮಗನೂ ನನ್ನ ದಾಸನೂ ಆದ ಜೆರುಬ್ಬಾಬೆಲನೇ, ಆ ದಿನಗಳಲ್ಲಿ ನಾನು ನಿನ್ನನ್ನು ಆರಿಸಿ ತೆಗೆದುಕೊಳ್ಳುವೆನು. ನನ್ನ ಮುದ್ರೆ ಉಂಗುರವನ್ನು ತೊಟ್ಟ ರಾಜನನ್ನಾಗಿ ನಿನ್ನನ್ನು ನೇಮಿಸುವೆನು," ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ ನುಡಿಯಿದು.